# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(5)ಪಿಆರ್/58/17-18

ಆಯುಕ್ತರವರ ಕಛೇರಿ,
ಮಹಾನಗರ ಪಾಲಿಕೆ ಕಛೇರಿಗಳು
ಬೆಂಗಳೂರು, ದಿನಾಂಕ: 17-7-2017

## ಸುತ್ತೋಲೆ

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಡತ/ಪತ್ರಗಳನ್ನು ಸಮುಚಿತ ಮಾರ್ಗದಲ್ಲಿ ರವಾನಿಸಿ ವಿಲೇವಾರಿ ಮಾಡುವ ಬಗ್ಗೆ.

ಉಲ್ಲೇಖ: ಆಯುಕ್ತರ ಆದೇಶ ಸಂಖ್ಯೆ: ಪಿಎಸ್ಆರ್/(4)/5285/14-15, ದಿನಾಂಕ: 25-08-2014.

* * * * *

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಛೇರಿ ಕೆಲಸ ಕಾರ್ಯಗಳ ಸಮರ್ಪಕ ನಿರ್ವಹಣೆಗೆ ಸಂಬಂಧಿಸಿದಂತೆ, ಕಡತ / ಪತ್ರಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸಿ, ಸಕಾಲದಲ್ಲಿ ವಿಲೇವಾರಿ ಮಾಡದೇ ಅನಧಿಕೃತ ವ್ಯಕ್ತಿಗಳು / ಅಧಿಕಾರರೇತರರು ಮುಖಾಂತರ ವೈಯಕ್ತಿಕವಾಗಿ ಕಡತಗಳನ್ನು ಮಾನ್ಯ ಆಯುಕ್ತರು ರವರಿಗೆ ಮಂಡಿಸುತ್ತಿರುವುದು ಕಂಡು ಬರುತ್ತಿದೆ.

ಆದ್ದರಿಂದ ಈಗಾಗಲೇ ಈ ಸಂಬಂಧ ಉಲ್ಲೇಖಿತದಂತೆ ಸುತ್ತೋಲೆ ಹೊರಡಿಸಿದ್ದಾಗ್ಯೂ, ಕಡತಗಳನ್ನು ಸಮುಚಿತ ಮಾರ್ಗದಲ್ಲಿ ಸಲ್ಲಿಸದೇ ಇರುವುದು ಕಂಡುಬಂದಿರುವುದರಿಂದ ಇನ್ನು ಮುಂದೆ ಯಾವುದೇ ಕಡತ ನಿರ್ವಹಣೆಯಲ್ಲಿ ನಿರ್ಲಕ್ಷತೆ ಮಾಡದೇ ಸಂಬಂಧಪಟ್ಟ ವಿಷಯ ನಿರ್ವಾಹಕರು / ಅಧಿಕಾರಿಗಳು ನಿಗಧಿಪಡಿಸಿರುವ ವಿಷಯ ವಹಿ / ವಿಶೇಷ ವಹಿಗಳಲ್ಲಿ ವಿವರಗಳನ್ನು ನಮೂದಿಸಿ, ಕಡತದ ಸಂಖ್ಯೆಗಳೊಂದಿಗೆ ಸಮುಚಿತ ಮಾರ್ಗದಲ್ಲಿ ಟಪಾಲು / ಅಧಿಕೃತ ಟಪಾಲುರವಾನೆಗಾರರ ಮೂಲಕವೇ ಕಡತ / ಪತ್ರಗಳನ್ನು ಮಂಡಿಸಿ ವಿಲೇವಾರಿ ಮಾಡಲು ಈ ಮೂಲಕ ಸೂಚಿಸಿದೆ. ಇನ್ನು ಮುಂದೆ ಇಂತಹ ಪ್ರಕರಣಗಳು ಕಂಡುಬಂದಲ್ಲಿ ಅಂತಹ ಅಧಿಕಾರಿ / ವಿಷಯ ನಿರ್ವಾಹಕರುಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಆಯುಕ್ತರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು : ಪೂಜ್ಯ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಉಪ ಮಹಾಪೌರರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಆಯುಕ್ತರ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಮಾನ್ಯ ಅಪರ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿ ರವರಿಗೆ ಕಳುಹಿಸಿದೆ.

: ಅಧ್ಯಕ್ಷರು, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸ್ಥಾಯಿ ಸಮಿತಿ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸಿದೆ.

: ಕೌನ್ಸಿಲ್ ಕಾರ್ಯದರ್ಶಿಯವರಿಗೆ ಕಳುಹಿಸುತ್ತಾ, ಪಾಲಿಕೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, ಮಾನ್ಯ ವಿರೋಧ ಪಕ್ಷದ ನಾಯಕರು, ಮಾನ್ಯ ಆಡಳಿತ ಪಕ್ಷದ ನಾಯಕರು ರವರುಗಳ ಅವಗಾಹನೆಗೆ ತರಲು ಕೋರಿದೆ.

: **ಎಲ್ಲಾ ವಲಯ ಅಪರ / ಜಂಟಿ ಆಯುಕ್ತರುಗಳಿಗೆ ಕಳುಹಿಸುತ್ತಾ, ತಮ್ಮ ಅಧೀನದಲ್ಲಿ ಬರುವ ಬಟವಾಡೆ ಅಧಿಕಾರಿಗಳಿಗೆ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕ್ರಮವಹಿಸಲು ಸೂಚಿಸುವಂತೆ ತಿಳಿಸಿದೆ.**

: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಮಾಹಿತಿಗೆ ಕಳುಹಿಸಿದೆ.

: **ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಮಾಹಿತಿಗೆ ಹಾಗೂ ಅಗತ್ಯ ಕ್ರಮಕ್ಕೆ ಕಳುಹಿಸಿದೆ.**

: ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ ಕಳುಹಿಸಿದೆ.

: ಮುಖ್ಯ ಲೆಕ್ಕಾಧಿಕಾರಿಗಳಿಗೆ / ಮುಖ್ಯ ಲೆಕ್ಕ ಪರಿಶೋಧಕರಿಗೆ ಮಾಹಿತಿಗೆ ಕಳುಹಿಸಿದೆ.

: ಎಲ್ಲಾ ವಲಯ ಸ.ನಿ.(ಹಣಕಾಸು) ರವರಿಗೆ ಮಾಹಿತಿಗೆ ಕಳುಹಿಸಿದೆ.      : ಕಛೇರಿ ಪ್ರತಿ.